4.3.2021

1-0-155

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಶಾಂತಾರಾಮ ಸಿದ್ದಿ, ಇವರು ನೀಡಿರುವ ಶೂನ್ಯ ವೇಳೆ ಪ್ರಶ್ನೆಯ ಮೇಲಿನ ಹೇಳಿಕೆ.**

****

ವಿಷಯ:ರಾಜ್ಯದಲ್ಲಿ ಈಗಾಗಲೇ ಬೇಸಿಗೆ ಬಿಸಿ ತಾರಕಕ್ಕೆ ಏರಿದ್ದು ಈ ಬಾರಿ ಪ್ರಮಾಣದ ತಾಪಮಾನವನ್ನು ಎದುರಿಸಬೇಕಾಗಬಹುದು ಎಂದು ಹವಾಮಾನ ಮುನ್ನೆಚ್ಚರಿಕೆ ನೀಡಿದೆ. ಈ ಬೆನ್ನಲ್ಲೇ ರಾಜ್ಯದ ಹಲವು ಜಿಲ್ಲಾ ಕೇಂದ್ರಗಳು ಸೇರಿ ನಗರ ಮತ್ತು ಗ್ರಾಮಗಳಲ್ಲಿ ಕುಡಿಯುವ ನೀರಿನ ಭಾರಿ ಅಭಾವ ಕಾಣಿಸುವ ಭೀತಿ ಇದೆ. ಪತ್ರಿಕೆಯ ಗ್ರೌಂಡ್ ರಿಪೋರ್ಟ್ಸ್ ಸಿದ್ಧಪಡಿಸಿದ ವರದಿ ಅನ್ವಯ 1600 ಕ್ಕೂ ಹೆಚ್ಚು ಹಳ್ಳಿಗಳಲ್ಲಿ ನೀರಿನ ಅಭಾವ ತಲೆದೋರಿದ್ದರೆ, 14 ಕ್ಕೂ ಹೆಚ್ಚು ಜಿಲ್ಲಾ ಕೇಂದ್ರಗಳಲ್ಲಿಯೂ ನೀರಿಗೆ ಹಾಹಾಕಾರ ಎದ್ದಿರುವುದು ಗೊತ್ತಾಗಿದೆ.

ರಾಜಧಾನಿ ಬೆಂಗಳೂರು, ದಕ್ಷಿಣ ಕನ್ನಡ ಸೇರಿ ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ಅಂತರ್ಜಲ ಮಟ್ಟ ಕುಸಿತ ಕಂಡಿದೆ. ಹಾಗಾಗಿ ನೀರಿನ ಅಭಾವದ ಬಿಸಿ ಬೆಂಗಳೂರು ಸೇರಿದಂತೆ ಚಾಮರಾಜನಗರ, ಯಾದಗಿರಿ, ಕಲಬುರಗಿ, ಬೆಳಗಾವಿ, ಹಾವೇರಿ, ಕೊಪ್ಪಳ ವಿಜಯಪುರ, ಬಳ್ಳಾರಿ, ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ಈಗಾಗಲೇ ತಲೆದೋರಿದ್ದು, ಬೇಸಿಗೆಯ ಮಧ್ಯಕಾಲದಲ್ಲಿ ಯಾವ ಹಂತವನ್ನೂ ತಲುಪಬಹುದಾಗಿದೆ.

ಹೀಗಾಗಿ ಬೇಸಿಗೆ ನಿರ್ವಹಣೆ ಕುರಿತು ಕರ್ನಾಟಕ ಸರ್ಕಾರವು ತುರ್ತು ಕ್ರಮ ಕೈಗೊಳ್ಳಬೇಕು ಮತ್ತು ಮಾನ್ಯ ಮುಖ್ಯಮಂತ್ರಿಯವರು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಸದನದ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

ಹೇಳಿಕೆ: ಕರ್ನಾಟಕ ರಾಜ್ಯವು ಮೂಲತಃ ಶುಷ್ಕ ಪ್ರದೇಶವಾಗಿದ್ದು, ಬೇಸಿಗೆಯು ಸನ್ನಿಹಿತವಾಗುತ್ತಿರುವುದರಿಂದ ರಾಜ್ಯದಲ್ಲಿ ಬರ ಪರಿಸ್ಥಿತಿ ಉಂಟಾಗಿ ಗ್ರಾಮೀಣ ಪ್ರದೇಶಗಳಲ್ಲಿ ಹಾಲಿ ಇರುವ ಜಲಮೂಲಗಳು ಬತ್ತಿಹೋಗಿ ಗ್ರಾಮದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಸಂಭವವಿರುತ್ತದೆ. ಆದ್ದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಬರ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಅನುಮೋದಿತ ತುರ್ತಾಗಿ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಹಾಗೂ ಈಗಾಗಲೇ ಹಂಚಿಕೆಯಾಗಿರುವ ಅನುದಾನದೊಂದಿಗೆ 15$^{th}$FC, SDRF, NDRF ಹಾಗೂ ಇತರೆ ಅನುದಾನವನ್ನು ಬಳಸಿಕೊಂಡು ಈ ಕೆಳಗಿನ ಅಂಶಗಳನ್ನು ಪಾಲಿಸುತ್ತಾ, ಬರಗಾಲದ ಸಮಯದಲ್ಲಿ ನೀರಿನ ಯಾವುದೇ ಅಭಾವ ಉಂಟಾಗದಂತೆ ಎಚ್ಚರವಹಿಸಲು ಸೂಚಿಸಿದೆ.

ಕಳೆದ ವರ್ಷದಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದಿಸಿದ ಅನುದಾನದಲ್ಲಿ ಕ್ರಿಯಾ ಯೋಜನೆಗಳನ್ನು ಜಿಲ್ಲಾಮಟ್ಟದಲ್ಲಿ ಅನುಮೋದನೆ ಪಡೆದು ಕಾಮಗಾರಿಗಳನ್ನು ನಿರ್ವಹಿಸಲು ಸೂಚಿಸಲಾಗಿದ್ದರೂ, ಇನ್ನೂಕಾಮಗಾರಿಗಳು ಕೈಗೆತ್ತಿಕೊಳ್ಳದೇ ಇರುವುದು, ಅಪೂರ್ಣಗೊಂಡಿರುವುದು ಹಾಗೂ ಅನುದಾನವನ್ನು ಸಂಪೂರ್ಣವಾಗಿ ಬಳಸದೇ ಇರುವುದು ಗಮನಿಸಲಾಗಿದೆ. ಈ ಸಂಬಂಧ ಜಿಲ್ಲೆಯ ಎಲ್ಲಾ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ಕಾಮಗಾರಿಗಳನ್ನು ತ್ವರಿತಗೊಳಿಸಿ ಅನುದಾನವನ್ನು ಸಮರ್ಪಕವಾಗಿ ಬಳಸಿ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ಸೂಚಿಸಿದೆ.

ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಕೈಗೆತ್ತಿಕೊಂಡ ಕಾಮಗಾರಿಗಳಲ್ಲಿ (SVS) ಬೋರ್‌ವೆಲ್‌ಗಳಿಗೆ ಅನುವು ಮಾಡಿಕೊಂಡಲ್ಲಿ, ಆಯಾ ಗ್ರಾಮದ ಸ್ಥಿತಿಯನ್ನು ಅವಲೋಕಿಸಿ, ಭೂವಿಜ್ಞಾನಿಯವರ ಸಲಹೆಯೊಂದಿಗೆ ಆಧ್ಯತೆ ಮೇರೆಗೆ ಅವುಗಳನ್ನುಕೊರೆಯಲು ಹಾಗೂ ಕೊರೆಯಲಾದ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಪಡೆದು ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಕ್ರಮ ವಹಿಸಲು ತಿಳಿಸಿದೆ.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದಾಗಿ ಉಂಟಾಗಬಹುದಾದ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ಪರಿಹರಿಸುವ ನಿಟ್ಟಿನಲ್ಲಿ, ಕಂದಾಯ ಇಲಾಖೆಯ ಸಮನ್ವಯದೊಂದಿಗೆ ಪರಿಹಾರ ರೂಪಿಸಲು ಸೂಚಿಸಲಾಗಿದೆ. ಟಾಸ್ಕ್ ಫೋರ್ಸ್ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನವನ್ನು ಆದ್ಯತೆಯ ಮೇರೆಗೆ ಕುಡಿಯುವ ನೀರು ಸಮಸ್ಯೆ ಇರುವ ಗ್ರಾಮೀಣ ಪ್ರದೇಶಗಳಲ್ಲಿ ಕೊಳವೆಬಾವಿ ಪುನಃಶ್ಚೇತನ ಕಾಮಗಾರಿಗಳಿಗಾಗಿ ಮತ್ತು ಸಂಯೋಜನೆಗಾಗಿ (Augmentation) ಮಾತ್ರ ಬಳಸಿ ಕೊಂಡು ಸಮರ್ಪಕವಾದ ಕ್ರಿಯಾ ಯೋಜನೆಯನ್ನು (CAP) ತಯಾರಿಸಿ, ಅನುಮೋದನೆ ಪಡೆದ ನಂತರ ಅನುಷ್ಠಾನಗೊಳಿಸುವುದು. ಇತರ ಘಟಕಗಳಾದ ಪೈಪ್‌ಲೈನ್ ವಿಸ್ತರಣೆ ಮೋಟಾರ್ ಪಂಪ್ ಅಳವಡಿಕೆ, ವಿದ್ಯುತ್ ಸಂಪರ್ಕ ಕಲ್ಪಿಸುವುದಕ್ಕಾಗಿ ಕಾಮಗಾರಿಯನ್ನು ಪೂರ್ಣಗೊಳಿಸಿ ಸಮರ್ಪಕವಾಗಿ ನೀರನ್ನು ಒದಗಿಸಲು ತಿಳಿಸಲಾಗಿರುತ್ತದೆ.

ಬತ್ತಿಹೋಗಿರುವ ಜಲಮೂಲಗಳನ್ನು ಪುನಃಶ್ಚೇತನಗೊಳಿಸುವ ಕಾಮಗಾರಿಗಳಿಗೆ ಮೊದಲ ಆದ್ಯತೆ ನೀಡಿ Contigency Action Plan ತಯಾರಿಸುವುದು. ಕಾರ್ಯಾಚಾರಣೆ ಹಾಗೂ ನಿರ್ವಹಣೆ ಸೇರಿದಂತೆ ಇನ್ನುಳಿದ ಅವಶ್ಯಕತೆಗಳಿಗಾಗಿ 15ನೇ ಹಣಕಾಸು ಆಯೋಗದ ಇತರೆ ಅನುದಾನವನ್ನು ಬಳಸಿಕೊಂಡು ಸಮರ್ಪಕವಾಗಿ ಕುಡಿಯುವ ನೀರನ್ನು ಒದಗಿಸಲು ಕ್ರಮವಹಿಸಲು ಸೂಚಿಸಿದೆ.ಅನಿವಾರ್ಯ ಸಂದರ್ಭದಲ್ಲಿ ಕೊಳವೆಬಾವಿ ಕೊರೆಯುವ ಸ್ಥಳವನ್ನು ಇಲಾಖೆಯ ಭೂ ವಿಜ್ಞಾನಿಗಳು ಗುರುತಿಸಿ ದೃಢೀಕರಿಸಿದ ನಂತರವೇ ಅನುಮೋದಿತ ಕ್ರಿಯಾಯೋಜನೆಯಂತೆ ಕೊಳವೆಬಾವಿಗಳನ್ನು ಕೊರೆದು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ನಿರ್ದೇಶನ ನೀಡಲಾಗಿರುತ್ತದೆ. ಹೊಸದಾಗಿ ಕೊರೆದ ಕೊಳವೆಬಾವಿಗಳ ನೀರಿನ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳುವುದು.

ಕೊರೆದ ಕೊಳವೆ ಬಾವಿಗಳ ಅಕ್ಷಾಂಶ ಮತ್ತು ರೇಖಾಂಶಗಳ ಮಾಹಿತಿಯನ್ನು ಬಿಲ್ಲು ಮತ್ತು ಅಳತೆ ಪುಸ್ತಕದಲ್ಲಿ ನಮೂದಿಸುವುದು, Geo-tagging ಮಾಡುವುದು, IMIS ನಲ್ಲಿ ಹಾಗೂ Mobile Application ನಲ್ಲಿ ಕೂಡಲೇ ವಿವರಗಳನ್ನು ಇಂಧೀಕರಿಸುವುದು (updation), ಕಾಮಗಾರಿಯ ಪ್ರಾರಂಭಿಕ, ಪ್ರಗತಿಯ ಮತ್ತು ಪೂರ್ಣಗೊಂಡ ಹಂತಗಳ Photo ಗಳನ್ನು GPS ವಿವರಗಳೊಂದಿಗೆ Geo-tagging ಮಾಡಿ ಇಂಧೀಕರಿಸಲು ತಿಳಿಸಲಾಗಿರುತ್ತದೆ.

ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ Material bankನ್ನು ಸೃಷ್ಟಿಸಿ ಬಳಸಿದ ಹಳೆಯ ಪಂಪ್‌ಗಳು ಇನ್ನಿತರೇ ಸಾಮಗ್ರಿಗಳನ್ನು ಶೇಖರಿಸಿ ಇಟ್ಟುಕೊಳ್ಳುವುದು. ಇವುಗಳನ್ನು ಅಗತ್ಯಕ್ಕೆ ತಕ್ಕಂತೆ ಅವಶ್ಯವಿರುವ ಕಡೆ ಪುನರ್ ಬಳಸುವುದು, ಎಲ್ಲಾ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ನಿರ್ವಹಿಸಲು ಸೂಚಿಸಿದೆ.

ವಿದ್ಯುತ್ ಸಂಪರ್ಕಕ್ಕಾಗಿ Defunct ಕಾಮಗಾರಿ ಮೂಲದಿಂದ ಹೊಸ ಕಾಮಗಾರಿಗಾಗಿ ಕಡ್ಡಾಯವಾಗಿ ಸ್ಥಳಾಂತರಿಸುವುದು. ಬತ್ತಿ ಹೋಗಿರುವ ಜಲಮೂಲಗಳನ್ನು ವ್ಯವಸ್ಥಿತವಾಗಿ ಮುಚ್ಚಿ ಕೂಡಲೇ ವರದಿಯನ್ನು ಸಲ್ಲಿಸುವುದು. ಬತ್ತಿಹೋಗಿರುವ ಕೊಳವೆಬಾವಿಯಲ್ಲಿನ ಪಂಪ್‌ಸೆಟ್ ಗಳನ್ನು, GI Pipe, Cable ಹಾಗೂ ಇತರ ಘಟಕಗಳನ್ನು ಕಡ್ಡಾಯವಾಗಿ ಮರು ಬಳಕೆ ಮಾಡಲು ತಿಳಿಸಲಾಗಿರುತ್ತದೆ.

ಈ ಮೇಲಿನ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ಪಾಲಿಸಿ, ರಾಜ್ಯದ ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ಸೂಕ್ತ ಮುನ್ನೆಚ್ಚರಿಕೆ ಕ್ರಮವನ್ನು ತೆಗೆದುಕೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಇಲಾಖೆಯಿಂದ ಸುತ್ತೋಲೆ ಹೊರಡಿಸಿ ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್
ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು